(ಮುಖ್ಯ ವಿಚಾರಣೆ ಮೊದಲ ಭಾಗವು 3 ನೇ ಜೆ.ಎಂ.ಎಫ್.ಸಿ ನ್ಯಾಯಾಲಯದಲ್ಲಿ ದಾಖಲಿಸಿಕೊಂಡಿದ್ದು, ನಂತರ ಪ್ರಕರಣವನ್ನು ಈ ನ್ಯಾಯಾಲಯಕ್ಕೆ ವರ್ಗಾಯಿಸಿದ್ದರಿಂದ ಮುಂದಿನ ಮುಖ್ಯ ವಿಚಾರಣೆಯನ್ನು ಈ ನ್ಯಾಯಾಲಯದಲ್ಲಿ ದಾಖಲಿಸಿಕೊಳ್ಳಲಾಯಿತು.)

**ದಿನಾಂಕಃ 22.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ- ಮಾನ್ಯ ಸರ್ಕಾರಿ ಅಭಿಯೋಜಕರಿಂದಃ-**

ಹಿಂದಿನ ಮುಖ್ಯ ವಿಚಾರಣೆಯಲ್ಲಿ ವಿಗ್ರಹದ ಬೆಳ್ಳಿ ಕಿರೀಟ ಬಿಟ್ಟು ಉಳಿದ ವಸ್ತುಗಳು ಪೊಲೀಸ್ ಠಾಣೆಯಲ್ಲಿ ಇದ್ದವು ಎಂದು ನುಡಿದಿರುತ್ತೇನೆ. ನಂತರ ನಾನು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ, ಸದರಿ ವಸ್ತುಗಳನ್ನು ನ್ಯಾಯಾಲಯದ ಆದೇಶದಂತೆ ಬಿಡಿಸಿಕೊಂಡಿರುತ್ತೇನೆ. ಈಗ ಸದರಿ ವಸ್ತುಗಳು ನಮ್ಮ ದೇವಸ್ಥಾನದ ಸ್ವಾಧೀನದಲ್ಲಿ ಇರುತ್ತದೆ.

ವಸ್ತುಗಳನ್ನು ಬಿಡಿಸಿಕೊಳ್ಳುವ ಸಮಯದಲ್ಲಿ ಸದರಿ ವಸ್ತುಗಳ ಪೋಟೋಗಳನ್ನು ತೆಗೆಯಲಾಗಿರುತ್ತದೆ. ಈ ಹಿಂದೆ ನಾನು ನಿಶಾನೆ ಪಿ-3 ಪೋಟೋವನ್ನು ಗುರುತಿಸಿರುತ್ತೇನೆ. ಈ ದಿನ ಉಳಿದ ವಸ್ತುಗಳಿಗೆ ಸಂಬಂಧಪಟ್ಟ ಪೋಟೋವನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿಯು ಪೋಟೋವನ್ನು ನೋಡಿ ಗುರುತಿಸಿದ್ದು, ಅದನ್ನು ನಿಶಾನೆ ಪಿ-4 ಎಂದು ಗುರುತಿಸಲಾಯಿತು.

ಬೀಗದ ಕೊಂಡಿಯ ಚೂರುಗಳು ಮತ್ತು ಬೀಗವನ್ನು ನೋಡಿದರೆ ಗುರುತಿಸಬಲ್ಲೆ. ನ್ಯಾಯಾಲಯದ ಮುಂದೆ ಬಿಳಿ ಬಟ್ಟೆಯಲ್ಲಿ ಸುತ್ತಿ ಸೀಲಾಗಿ ಸುಸ್ಥಿತಿಯಲ್ಲಿದ್ದ ವಸ್ತುಗಳನ್ನು ನ್ಯಾಯಾಲಯದ ಅನುಮತಿ ಮೇರೆಗೆ ತೆಗೆದು ನೋಡಲಾಗಿ ಅದರಲ್ಲಿ ಒಂದು ಕತ್ತರಿಸಿದ ಬೀಗ ಇದ್ದು, ಅದನ್ನು ಮು.ಮಾಃ-1 ಎಂದು ಗುರುತಿಸಲಾಯಿತು. ಒಂದು ಮುರಿದ ಕೊಂಡಿ ಇದ್ದು, ಅದನ್ನು ಮು.ಮಾಃ-2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 6 ನೇ ಆರೋಪಿ ಪರ ವಕೀಲರಿಂದಃ –**

6 ನೇ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ.

**ಮರುವಿಚಾರಣೆಃ ಇಲ್ಲ**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-

3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಮೈಸೂರು.